# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 819

ಸದಸ್ಯರ ಹೆಸರು : ಶ್ರೀ. ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.

ಉತ್ತರಿಸುವ ದಿನಾಂಕ : 23.07.2024

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ತೆಂಗಿನ ಬೆಳೆಗಳಿಗೆ ವ್ಯಾಪಕವಾಗಿ ಬೆಂಕಿ ರೋಗ ಹಾಗೂ ನುಸಿ ಪೀಡೆ ಇತರೆ ರೋಗಗಳು ಹರಡಿದ್ದು, ಇವುಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು; | ರಾಜ್ಯದಲ್ಲಿ ತೆಂಗಿನ ಬೆಳೆಗೆ ಹರಡಿರುವ ಬೆಂಕಿ ರೋಗ (ಕಪ್ಪು ತಲೆ ಹುಳು), ನುಸಿ ಪೀಡೆ, ಕಾಂಡ ಸೋರಗು ರೋಗ, ಕೊಳೆ ರೋಗ, ಸುಳಿ ಕೊರೆಯುವ ದುಂಬಿ, ಅಣಬೆ ರೋಗ ಇತ್ಯಾದಿಗಳ ನಿವಾರಣೆಗೆ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. **<u>ಹೊಸ ಮರುನಾಟಿ ಮತ್ತು ಪುನ:ಶ್ಚೇತನ ಕಾರ್ಯಕ್ರಮ ಹಾಗೂ ನಿರ್ವಹಣೆ ಕಾರ್ಯಕ್ರಮ</u>**<br>ತೆಂಗಿನ ತೋಟಗಳ ಪುನ:ಶ್ಚೇತನ ಹಾಗೂ ಮರುನಾಟಿ ಮತ್ತು ನಿರ್ವಹಣೆಗಾಗಿ ಒಂದು ಹೆಕ್ಟೇರ್ ಪ್ರದೇಶಕ್ಕೆ ತಗಲುವ ಘಟಕ ವೆಚ್ಚ ರೂ.1,10,000/- ಗಳಲ್ಲಿ ಪ್ರತಿ ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 53,500/- ಗಳನ್ನು ಮೊದಲನೇ ವರ್ಷ ರೂ.44,750/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/ ಗಳ ಸಹಾಯಧನವನ್ನು ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ 2423 ಹೆಕ್ಟೇರ್ ಪ್ರದೇಶದಲ್ಲಿ 10046 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿರುತ್ತದೆ.<br>2. **<u>ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆ</u>**<br>ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆ ಕೈಗೊಳ್ಳಲು ಒಂದು ಹೆಕ್ಟೇರ್ ಗೆ ರೂ. 35,000/- ಗಳನ್ನು 2 ವರ್ಷಗಳ ಅವಧಿಗೆ ಮೊದಲನೇ ವರ್ಷ ರೂ.17500/- ಗಳು ಮತ್ತು ಎರಡನೇ ವರ್ಷ ರೂ.17500/- ರಂತೆ ಸಹಾಯಧನ ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ ರೋಗ ಮತ್ತು ಕೀಟಬಾಧಿತ ತಾಕುಗಳನ್ನು ಗುಚ್ಛಗಳಲ್ಲಿ ಆಯ್ಕೆ ಮಾಡಿ 34618 ಹೆಕ್ಟೇರ್ ಪ್ರದೇಶದಲ್ಲಿ 47940 ಫಲಾನುಭವಿಗಳನ್ನು ಗುರುತಿಸಿದ್ದು, ಕಾರ್ಯಕ್ರಮ ಪ್ರಗತಿಯಲ್ಲಿರುತ್ತದೆ.<br>3. ತೆಂಗಿನ ಬೆಳೆಯಲ್ಲಿ ಕಂಡುಬರುವ ರೋಗ/ಕೀಟಗಳ ಹತೋಟಿ ಕ್ರಮಗಳ ಕುರಿತು ತೋಟಗಾರಿಕಾ ಮಹಾವಿದ್ಯಾಲಯದ ವಿಷಯ ತಜ್ಞರಿಂದ ಹಾಗೂ ಇಲಾಖಾ ಅಧಿಕಾರಿಗಳಿಂದ ರೈತರಿಗೆ 72 ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ.<br>4. ಕಪ್ಪು ತಲೆ ಹುಳುವಿನ ನಿಯಂತ್ರಣಕ್ಕಾಗಿ ಇಲಾಖೆಯ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ |

| | | |
|---|---|---|
| | | ಸಮಗ್ರ ನಿಯಂತ್ರಣ ಯೋಜನೆಯಡಿ ಇಲಾಖಾ ಪ್ರಯೋಗ ಶಾಲೆಗಳಲ್ಲಿ ಗೋನಿಯೋಜಸ್ ಪರೋಪಜೀವಿಗಳ ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲಾಗುತ್ತಿದೆ. 2023-24 ನೇ ಸಾಲಿನಲ್ಲಿ 10473 ಫಲಾನುಭವಿಗಳಿಗೆ ವಿತರಿಸಲಾಗಿರುತ್ತದೆ ಹಾಗೂ ಪ್ರಸಕ್ತ ಸಾಲಿನಲ್ಲಿ ರೂ. 140.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಈವರೆಗೆ ರೂ. 70.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿ ಪರೋಪ ಜೀವಿಗಳ ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ತೆಂಗಿನ ಉತ್ಪನ್ನವಾದ ಕೊಬ್ಬರಿಗೆ ಸರಿಯಾದ ಬೆಂಬಲ ಬೆಲೆ ಇಲ್ಲದೆ ತೆಂಗು ಬೆಳೆಗಾರರು ಸಂಕಷ್ಟದಲ್ಲಿದ್ದು, ಪ್ರತಿ ಕ್ವಿಂಟಾಲ್ ಕೊಬ್ಬರಿಗೆ ಕನಿಷ್ಟ ಹದಿನೈದು ಸಾವಿರ ಬೆಂಬಲ ಬೆಲೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪ್ರತಿ ಕ್ವಿಂಟಾಲ್ ಉಂಡೆ ಕೊಬ್ಬರಿಗೆ ಕೇಂದ್ರ ಸರ್ಕಾರವು ರೂ. 12000 MSP ಬೆಲೆ ನಿಗದಿಪಡಿಸಿದ್ದು, ಅದರ ಜೊತೆಗೆ ರಾಜ್ಯ ಸರ್ಕಾರ ರೂ. 1500 ಗಳನ್ನು ನೀಡುತ್ತಿದೆ, ಒಟ್ಟು ಪ್ರತಿ ಕ್ವಿಂಟಾಲ್ ಗೆ ರೂ.13500/- ನೀಡಲಾಗುತ್ತಿದೆ. ರೂ. 15000 ಗಳಿಗೆ ಬೆಂಬಲ ಬೆಲೆ ನೀಡುವ ಪ್ರಸ್ತಾವನೆ ತೋಟಗಾರಿಕೆ ಇಲಾಖೆಯ ಪರಿಶೀಲನೆಯಲ್ಲಿ ಇರುವುದಿಲ್ಲ. |

HORTI 321 HGM 2024

S. S. -Kon

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು